## ಕರ್ನಾಟಕ ಸರ್ಕಾರ

ಸಂ:ಗ್ರಾಅಪ 79 ಗ್ರಾನೀಸ(4)2010

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:30.04.2014.

## ಸುತ್ತೋಲೆ

ವಿಷಯ: ಗ್ರಾಮೀಣ ನೀರು ಸರಬರಾಜು ಯೋಜನೆಗಳ ವಿದ್ಯುದ್ಧೀಕರಣ ಸಂಬಂಧದ ಕಾಮಗಾರಿಗಳ ಅನುಷ್ಠಾನದಲ್ಲಿ ತೊಡಗಿರುವ ಗ್ರಾಮ ಪಂಚಾಯಿತಿಯ ಅಭಿವೃದ್ಧಿ ಅಧಿಕಾರಿ ಮತ್ತು ಕಾರ್ಯದರ್ಶಿಗಳ ವಿರುದ್ಧ ಪ್ರಕರಣಗಳನ್ನು ದಾಖಲು ಮಾಡದೇ ಇರುವ ಕುರಿತು.

ಉಲ್ಲೇಖ:
1. ಸರ್ಕಾರದ ಸಮ ಸಂಖ್ಯೆ:ಪತ್ರ ದಿನಾಂಕ:24.01.2012.
2. BESCOM ಸುತ್ತೋಲೆ ಸಂಖ್ಯೆ:BESCOM/Gm(CA)Bc-9/F-1554/2010–11, ದಿನಾಂಕ:17.11.2011.

---

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (2)ರ **BESCOM** ಸುತ್ತೋಲೆಯಲ್ಲಿ, ಗ್ರಾಮೀಣ ನೀರು ಸರಬರಾಜು ಯೋಜನೆಗಳ ಅನುಷ್ಠಾನದಲ್ಲಿ ತೊಡಗಿರುವ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಿಬ್ಬಂದಿಗಳ ಮೇಲೆ ಪೋಲೀಸ್ ಇಲಾಖೆಯಲ್ಲಿ ದಾಖಲಿಸಿರುವ ಪ್ರಕರಣಗಳನ್ನು ಕೂಡಲೇ ಹಿಂಪಡೆಯಲು ಮತ್ತು ಇಂತಹ ಸನ್ನಿವೇಶಗಳಲ್ಲಿ ಇನ್ನು ಮುಂದೆ ಯಾವುದೇ ಕಾರಣಕ್ಕೂ ಪ್ರಕರಣಗಳನ್ನು ದಾಖಲಿಸದೆ ಇರಲು ಸ್ಪಷ್ಟವಾಗಿ ಸೂಚಿಸಲಾಗಿದ್ದು, ಉಲ್ಲೇಖ (1)ರ ಸರ್ಕಾರದ ಪತ್ರದಲ್ಲಿ ಈ ಸಂಬಂಧ ಅಗತ್ಯ ಕ್ರಮವಹಿಸಲು ಕೋರಲಾಗಿತ್ತು. ಪುನಃ ಈ ಸಂಬಂಧ ಸ್ಪಷ್ಟೀಕರಣ ನೀಡುವ ಸಲುವಾಗಿ ಮೇಲ್ಕಂಡ ಉಲ್ಲೇಖ (1) & (2)ರ ಪತ್ರಗಳ ಪ್ರತಿಗಳನ್ನು ಈ ಪತ್ರದೊಂದಿಗೆ ಮಾಹಿತಿಗಾಗಿ ಅಡಕವಿರಿಸಿ ಕಳುಹಿಸುತ್ತಾ, ಗ್ರಾಮೀಣ ಕುಡಿಯುವ ನೀರು ಯೋಜನೆಗಳ ವಿದ್ಯುದ್ಧೀಕರಣ ಸಂಬಂಧದ ಕಾಮಗಾರಿಗಳನ್ನು ಅನುಷ್ಠಾನಗೊಳಿಸುವ ಕುರಿತು ಸಂಬಂಧಪಟ್ಟ ಎಸ್ಕಾಂಗಳನ್ನು ಕೂಡಲೇ ಸಂಪರ್ಕಿಸಿ, ತ್ವರಿತವಾಗಿ ಗ್ರಾಮೀಣ ಕುಡಿಯುವ ನೀರು ಯೋಜನೆಗಳನ್ನು ವಿದ್ಯುದ್ಧೀಕರಣಗೊಳಿಸಿ, ಸಾರ್ವಜನಿಕ ಬಳಕೆಗೆ ಸಮರ್ಪಿಸಲು ಅಗತ್ಯ ಜರೂರು ಕ್ರಮ ಕೈಗೊಳ್ಳಲು ತಿಳಿಸಿದೆ.

(ರಾಮಕೃಷ್ಣ)
ಸರ್ಕಾರದ ಉಪ ಕಾರ್ಯದರ್ಶಿ (ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
**ಇಮೇಲ್: rk3452000@gmail.com**
**ಫೋನ್:22032806, ಫ್ಯಾಕ್ಸ್:22203175**

ಪ್ರತಿಯನ್ನು:

1. ರಾಜ್ಯ ಎಲ್ಲಾ (30) ಜಿಲ್ಲಾ ಪಂಚಾಯತ್‌ಗಳ ಅಧ್ಯಕ್ಷರುಗಳು ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, 2ನೇ ಮಹಡಿ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು-09 ಇವರ ಮಾಹಿತಿಗಾಗಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ ಕೋರಿ ಕಳುಹಿಸಿದೆ.
3. ರಾಜ್ಯದ ಎಲ್ಲಾ (30) ಜಿಲ್ಲೆಗಳ ಜಿಲ್ಲಾಧಿಕಾರಿಗಳು.
4. ರಾಜ್ಯದ ಎಲ್ಲಾ (8) ಅಧೀಕ್ಷಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತಗಳು.
5. ರಾಜ್ಯದ ಎಲ್ಲಾ (38) ಕಾರ್ಯಪಾಲಕ ಇಂಜಿನಿಯರ್‌ಗಳು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳು.